# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹಾವೇರಿ ಜಿಲ್ಲೆ, ಶಿಗ್ಗಾವಿ ತಾಲ್ಲೂಕು, ಬನ್ನೂರು ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಬಸವನಗೌಡ ಪಾಟೀಲ, ಕೃಷಿ ಅಧಿಕಾರಿ, ತಾಲೂಕು ಜಲಾನಯನ ಅಭಿವೃದ್ಧಿ ಇಲಾಖೆ, ಶಿಗ್ಗಾವಿ, ಹಾವೇರಿ ಜಿಲ್ಲೆ ಇವರ ದುರ್ನಡತೆಗಾಗಿ ಶಿಸ್ತು ಕ್ರಮ ಜರುಗಿಸಲು ಪ್ರಕರಣವನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಯ ನಿಯಮ 14ಎರನ್ವಯ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ.

**ಓದಲಾಗಿದೆ:**

ಸಹಾಯಕ ನಿಬಂಧಕರು (ಕಾನೂನು ಅಭಿಪ್ರಾಯ-1) ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂ.Compt/Uplok/BGM/1809/2012/ARLO-1

ದಿನಾಂಕ: 14-10-2014.

*********

**ಪ್ರಸ್ತಾವನೆ**

ಬನ್ನೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಹೂಗಾರ ಕೆರೆ ಹೂಳೆತ್ತುವ ಕಾಮಗಾರಿ ಮತ್ತು ಕಾಲುವೆ ನಿರ್ಮಾಣಕ್ಕೆ ಸಂಬಂಧಿಸಿದ 2011-12ನೇ ಸಾಲಿನಲ್ಲಿ ಕಾಮಗಾರಿಯಲ್ಲಿ ಹಣ ದುರುಪಯೋಗ ನಡೆದಿದೆ ಎಂದು ಬನ್ನೂರು ಗ್ರಾಮ ನಿವಾಸಿ ಶ್ರೀ ಮಹದೇವಪ್ಪ ಜಿನ್ನಪ್ಪ ಸಿದ್ದಣ್ಣವರ್ ಇವರು ಲೋಕಾಯುಕ್ತರಿಗೆ ನೀಡಿರುವ ದೂರಿನ ಹಿನ್ನೆಲೆಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ಮಾನ್ಯ ಲೋಕಾಯುಕ್ತರು ಸದರಿ ಪ್ರಕರಣವನ್ನು ಕರ್ನಾಟಕ ಲೋಕಾಯುಕ್ತ ಅಧಿನಿಯಮದ ಕಲಂ9 ರನ್ವಯ ಕಾರ್ಯಕಾರಿ ಅಭಿಯಂತರರು, ತಾಂತ್ರಿಕ ಪರಿಶೋಧಕ ಕೋಶ, ಲೋಕಾಯುಕ್ತ ಇವರಿಗೆ ತನಿಖೆಗೆ ವಹಿಸಲಾಗಿತ್ತು. ತನಿಖಾಧಿಕಾರಿಯು ಈ ಪ್ರಕರಣದ ಕುರಿತು ಈಗಾಗಲೇ ಓಂಬಡ್ಸ್‌ಮನ್‌ರವರ ಆದೇಶದಂತೆ ರೂ. 2,57,987/- ಹಣವು ಈ ಕಾಮಗಾರಿಯಲ್ಲಿ ದುರುಪಯೋಗವಾಗಿದೆಯೆಂದು ವರದಿಯಲ್ಲಿ ಉಲ್ಲೇಖಿಸಿದ್ದು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ, ಶಿಗ್ಗಾವಿ ಇವರಿಂದ ವರದಿಯನ್ನು ಮಾನ್ಯ ಲೋಕಾಯುಕ್ತರಿಂದ ಪಡೆಯಲಾಗಿತ್ತು.

2. ಸದರಿ ತನಿಖಾ ವರದಿಯಲ್ಲಿ ಒಂದನೇ ಪ್ರತಿವಾದಿಯಾದ ಶ್ರೀ ಯು.ಎಸ್. ಪಲ್ಲಾನ್(ನಿವೃತ್ತ) ಎರಡನೇ ಪ್ರತಿವಾದಿಯಾದ ಶ್ರೀ ಬಸವನಗೌಡ ಪಾಟೀಲ, ಕೃಷಿ ಅಧಿಕಾರಿ, ಜಿಲ್ಲಾ ಜಲಾನಯನ ಅಭಿವೃದ್ಧಿ ಇಲಾಖೆ, ಹಾವೇರಿ, ಮತ್ತು ಇನ್ನೊಬ್ಬ ಅಧಿಕಾರಿಯಾದ ಶ್ರೀ ಎಂ.ಎಸ್. ಮೋಲಾ ಇವರುಗಳಿಂದ ದುರುಪಯೋಗವಾಗಿರುವ ಒಟ್ಟು ಮೊತ್ತ ರೂ. 2,57,987/- ಗಳ ಪೈಕಿ ಕ್ರಮವಾಗಿ ಮೊದಲನೇ ಪ್ರತಿವಾದಿ ರೂ. 12,900/- ಗಳನ್ನು ಹಾಗೂ 2ನೇ ಪ್ರತಿವಾದಿ ರೂ. 51,600/-ಗಳನ್ನು ಕರ್ನಾಟಕ ಗ್ರಾಮೀಣ ವಿಕಾಸ ಬ್ಯಾಂಕ್, ಬನ್ನೂರು ಶಾಖೆಯ ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯ ಶಾಖೆಗೆ ಜಮೆ ಮಾಡಿರುತ್ತಾರೆ. ಆದರೆ ಸದರಿ ಪ್ರಕರಣದಲ್ಲಿ ಅಂದಿನ ಸಹಾಯಕ ಕೃಷಿ ಅಧಿಕಾರಿಯಾದ ಶ್ರೀ ಎಂ.ಎಸ್. ಮೋಲಾ ಇವರು ದಿನಾಂಕ:21-08-2012ರಂದು ಮರಣ ಹೊಂದಿರುವುದರಿಂದ ಇವರಿಂದ ದುರುಪಯೋಗವಾದ ಹಣದ ಮೊತ್ತ ರೂ.1,93,487/- ಜಮೆಯಾಗಿರುವುದಿಲ್ಲ.

3. ಒಂದನೇ ಪ್ರತಿವಾದಿಯಾದ ಶ್ರೀ ಯು.ಎಸ್.ಪಲ್ಲಾನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ (ನಿವೃತ್ತ) ಇವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ನೌಕರರಾಗಿರುವುದರಿಂದ ಅವರ ಪ್ರಕರಣದಲ್ಲಿ ಇಲಾಖಾ ವಿಚಾರಣೆಗಾಗಿ ಪ್ರಕರಣವನ್ನು ಆ ಇಲಾಖೆಯು ಮಾನ್ಯ ಉಪ

ಲೋಕಾಯುಕ್ತರವರಿಗೆ ಈಗಾಗಲೇ ವಹಿಸಿದೆ. ಶ್ರೀ ಬಸವನಗೌಡ ಪಾಟೀಲ್, ಕೃಷಿ ಅಧಿಕಾರಿ ಇವರು ನೀಡಿರುವ ಲಿಖಿತ ಹೇಳಿಕೆಯು ತೃಪ್ತಿಕರವಾಗಿರದೇ ಇರುವುದರಿಂದ ಹಾಗೂ ದುರುಪಯೋಗ ಮಾಡಿದ ಹಣವನ್ನು ಸರ್ಕಾರಕ್ಕೆ ಜಮೆ ಮಾಡಿದ್ದಾಗ್ಯೂ ಕೂಡ ಅವರು ಸಾರ್ವಜನಿಕ ಕಾಮಗಾರಿಯನ್ನು ನಿರ್ವಹಿಸುವಲ್ಲಿ ಆರ್ಥಿಕ ಲೋಪವನ್ನುಂಟು ಮಾಡಿರುವುದರ ಮೂಲಕ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳ ನಿಯಮ 3(i) (ii) (iii) ರನ್ವಯ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಅನುವಾಗುವಂತೆ ಪ್ರಕರಣವನ್ನು ಇಲಾಖಾ ವಿಚಾರಣೆಗಾಗಿ ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಯ ನಿಯಮ 14-ಎ ರನ್ವಯ ತಮ್ಮ ಪ್ರಾಧಿಕಾರಕ್ಕೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಅಧಿನಿಯಮ ಕಲಂ 12(3) ರಡಿ ಸಲ್ಲಿಸಿದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

4. ಈ ವರದಿಯನ್ನು ಮೇಲೆ ಓದಲಾದ ಪತ್ರದೊಂದಿಗೆ ಸಹಾಯಕ ನಿಬಂಧಕರು (ಕಾನೂನು ಅಭಿಪ್ರಾಯ-1) ಇವರು ಸರ್ಕಾರಕ್ಕೆ ಕಳುಹಿಸುತ್ತಾ ಮಾನ್ಯ ಉಪ ಲೋಕಾಯುಕ್ತರ ವರದಿಯ ಮೇಲೆ ಕೈಗೊಂಡ ಕ್ರಮದ ಬಗ್ಗೆ ವರದಿಯನ್ನು ಅದೇ ಅಧಿನಿಯಮದ ಕಲಂ 12(4) ರನ್ವಯ ಮಾಹಿತಿ ನೀಡುವಂತೆ ಕೋರಿರುತ್ತಾರೆ.

5. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಶ್ರೀ ಬಸವನಗೌಡ ಪಾಟೀಲ, ಕೃಷಿ ಅಧಿಕಾರಿ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಯ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ,

**ಸರ್ಕಾರದ ಆದೇಶ ಸಂ. ಕೃಇ 83 ಕೃಪವಿ 2014, ಬೆಂಗಳೂರು ದಿನಾಂಕ: 03-01-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಬಸವನಗೌಡ ಪಾಟೀಲ, ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ಶಿಗ್ಗಾವಿ, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಈ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪ ಲೋಕಾಯುಕ್ತ-1ರವರಿಗೆ ವಹಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಹಾಗೂ ಅವರ ಹೆಸರಿನಲ್ಲಿ,

(ಎಸ್.ಆರ್.ಬಸವರಾಜಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.
(ಸೇವೆಗಳು ಮತ್ತು ಸಮನ್ವಯ)

ಇವರಿಗೆ:-

1. ಮಹಾಲೇಖಪಾಲರು, (ಎ ಮತ್ತು ಇ). ಕರ್ನಾಟಕ, ಬೆಂಗಳೂರು.

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಸಹಾಯಕ ನಿಬಂಧಕರು, ಕಾನೂನು ಅಭಿಪ್ರಾಯ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
5. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
6. ಉಪ ಕೃಷಿ ನಿರ್ದೇಶಕರು-1, ಹಾವೇರಿ ಜಿಲ್ಲೆ.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ.
8. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶಿಗ್ಗಾವಿ ತಾಲ್ಲೂಕು, ಶಿಗ್ಗಾವಿ.
9. ಶ್ರೀ ಬಸವನಗೌಡ ಪಾಟೀಲ, ಕೃಷಿ ಅಧಿಕಾರಿ, -ಕೃಷಿ ಆಯುಕ್ತರ ಮುಖಾಂತರ
10. ಸಮನ್ವಯ ಶಾಖೆ/ ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.